# ಆರ್.ವಿ.ದೇಶಪಾಂಡೆ ಅವರನ್ನು ಭೇಟಿಯಾದ ವಿ.ಡಿ.ಐ.ಟಿ ಕಾಲೇಜು ಸಿಬ್ಬಂದಿ



**ನುಡಿಜೇನು ವರದಿ**

**ಹಳಿಯಾಳ:** ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರು ಹಾಗೂ ಹಿರಿಯ ಶಾಸಕರಾದ ಆರ್.ವಿ.ದೇಶಪಾಂಡೆ ಅವರನ್ನು ವಿ.ಡಿ.ಐ.ಟಿ ಕಾಲೇಜಿನ ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗ ಮಂಗಳವಾರ ಸೌಜನ್ಯಯುತವಾಗಿ ಭೇಟಿಯಾದರು.

ಈ ಸಂದರ್ಭದಲ್ಲಿ ಕಾಲೇಜಿನ ಶೈಕ್ಷಣಿಕ ಅಭಿವೃದ್ಧಿ, ವಿದ್ಯಾರ್ಥಿಗಳ ಕೌಶಲ್ಯಾಭಿವೃದ್ಧಿ, ತಾಂತ್ರಿಕ ಕ್ಷೇತ್ರದಲ್ಲಿನ ಹೊಸ ಪ್ರಯೋಗಗಳು ಹಾಗೂ ಅತ್ಯಾಧುನಿಕ ವೃತ್ತಿಪರ ತರಬೇತಿ ಕಾರ್ಯಕ್ರಮಗಳ ಕುರಿತು ಸಮಾಲೋಚನೆ ನಡೆಯಿತು.

ತಾಂತ್ರಿಕ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವ ಮೂಲಕ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಕುರಿತು ಚರ್ಚೆ ನಡೆಯಿತು.

ಈ ವೇಳೆ ಶಾಸಕರಾದ ಆರ್.ವಿ.ದೇಶಪಾಂಡೆ ಅವರು ತಾಂತ್ರಿಕ ಶಿಕ್ಷಣ ಕ್ಷೇತ್ರದ ನವೀನ ಯೋಜನೆಗಳು, ಸರ್ಕಾರದ ಸಹಕಾರ ಮತ್ತು ಯುವಜನರ ಭವಿಷ್ಯ ನಿರ್ಮಾಣದ ಕುರಿತು ಅಗತ್ಯ ಸಲಹೆ ಹಾಗೂ ಸೂಕ್ತ ಮಾರ್ಗದರ್ಶನ ನೀಡಿದರು.